ಕರ್ನಾಟಕ ಸರ್ಕಾರ
ಮಕ್ಕಳ ರಕ್ಷಣಾ ನಿರ್ದೇಶನಾಲಯ
C/o , ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒಂದನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ|| ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001,
E-mail ID: icps.kar@gmail.com Ph.No.080-22879381/82

ಸಂಖೆ: ಕರಾಸಮರಯೋ/ನೋಂ/FCRA/22/2020-21 ದಿನಾಂಕ: 27 -10-2020

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು
ಜಿಲ್ಲಾ ಮಕ್ಕಳ ರಕ್ಷಣಾ ಘಟಕ
30 ಜಿಲ್ಲೆಗಳು

ಮಾನ್ಯರೇ,

ವಿಷಯ: ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಕ್ಕಳ ಪಾಲನಾ ಸಂಸ್ಥೆಗಳು ಬಾಲನ್ಯಾಯ ಕಾಯ್ದೆ, 2015 ರಡಿ ನೋಂದಣಿಯಾಗಿ ವಿದೇಶಿ ಕೊಡುಗೆಗಳನ್ನು FCRA Act, 2010 ರಡಿ ಪಡೆಯುವ ಬಗ್ಗೆ

ಉಲ್ಲೇಖ: Under Secretory, Ministry of Women and Child Development, Government of India F.No.CW-II/5/2020-CW-II Date: 19/08/2020.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಜಿಲ್ಲೆಗಳಲ್ಲಿ ಬಾಲನ್ಯಾಯ ಕಾಯ್ದೆ, 2015 ರಡಿ ನೋಂದಣಿಯಾಗಿ ಕಾರ್ಯನಿರ್ವಹಿಸುತ್ತಿರುವ ಮಕ್ಕಳ ಪಾಲನಾ ಸಂಸ್ಥೆಗಳು ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವಂತೆ Foreign Contribution (Regulation) Act, 2010 ರಡಿ ನೋಂದಣಿ ಮಾಡಿಕೊಂಡು ವಿದೇಶಿ ಕೊಡುಗೆ ಅಥವಾ ವಿದೇಶಿ ಆಥಿತ್ಯವನ್ನು ಪಡೆದುಕೊಳ್ಳುತ್ತಿದ್ದಾರೆ ಎಂಬ ವಿಷಯವನ್ನು ಸರ್ಕಾರದ ಗಮನಕ್ಕೆ ತರುವುದು ಅಗತ್ಯವಾಗಿರುತ್ತದೆ.

ಆದ್ದರಿಂದ ಎಲ್ಲಾ ಜಿಲ್ಲೆಗಳ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಈ ಬಗ್ಗೆ ಕ್ರಮವಹಿಸಿ ತಮ್ಮ ಜಿಲ್ಲೆಯಲ್ಲಿ ಯಾವುದಾದರೂ ಮಕ್ಕಳ ಪಾಲನಾ ಸಂಸ್ಥೆಯು Foreign Contribution (Regulation) Act, 2010 ರಡಿ ನೋಂದಣಿಯಾಗಿದ್ದರೆ ಕೂಡಲೇ ಸದರಿ ಕಾಯ್ದೆಯ ನೋಂದಣಿ ಪ್ರಮಾಣ ಪತ್ರದ ಪ್ರತಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸಲು ಸೂಚಿಸಲಾಗಿದೆ.

ಮುಂದುವರೆದು ಇನ್ನು ಮುಂದೆ ಜಿಲ್ಲೆಗಳಲ್ಲಿ ಯಾವುದಾದರೊಂದು ಮಕ್ಕಳ ಪಾಲನಾ ಸಂಸ್ಥೆಯು ಬಾಲನ್ಯಾಯ ಕಾಯ್ದೆ, 2015ರಡಿ ನೋಂದಣಿ ಅಥವಾ ನವೀಕರಣಕ್ಕಾಗಿ ಪ್ರಸ್ತಾವನೆಯನ್ನು ಸಲ್ಲಿಸುವಾಗ ಸದರಿ ಸಂಸ್ಥೆಯು ಒಂದು ವೇಳೆ Foreign Contribution (Regulation) Act, 2010 ರಡಿ ನೋಂದಣಿಯಾಗಿ ಪ್ರಮಾಣ ಪತ್ರವನ್ನು ಪಡೆದುಕೊಂಡಿದ್ದರೆ ಆ ಪ್ರಮಾಣ ಪತ್ರದ ಪ್ರತಿಯನ್ನು **ಸದರಿ ಪ್ರಸ್ತಾವನೆಗಳೊಂದಿಗೆ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ** ಮತ್ತು ಒಂದು ವೇಳೆ ವೈಯಕ್ತಿಕ ಅಥವಾ ಸಾಮೂಹಿಕವಾಗಿ ವಿದೇಶಿ ಕೊಡುಗೆ /ಆಥಿತ್ಯದ ಅನುದಾನವನ್ನು ಪಡೆಯುತ್ತಿದ್ದರೆ ಅದರ ವಿವರವನ್ನು ಸಹ ನೋಂದಣಿ ಅಥವಾ ನವೀಕರಣ ಪ್ರಸ್ತಾವನೆಯೊಂದಿಗೆ ಸಲ್ಲಿಸತಕ್ಕದ್ದು.

**ಲಗತ್ತು** : ಉಲ್ಲೇಖಿತ ಪತ್ರದ ಪ್ರತಿಯನ್ನು ಲಗತ್ತಿಸಿದೆ.

ತಮ್ಮ ವಿಶ್ವಾಸಿ
27.10.2020
ನಿರ್ದೇಶಕರು
ಮಕ್ಕಳ ರಕ್ಷಣಾ ನಿರ್ದೇಶನಾಲಯ
ಬೆಂಗಳೂರು